**All India Radio: Bangalore**
**Regional Bulletin In Kannada**
**19.10.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.10.2025 / 6.40 p.m.**

**<><><><>**

ಮುಖ್ಯಾಂಶಗಳು

1. ವಿಪತ್ತು ಪರಿಹಾರಕ್ಕಾಗಿ ರಾಜ್ಯಕ್ಕೆ ೩೮೪ ಕೋಟಿ ರೂಪಾಯಿ ಬಿಡುಗಡೆ ಮಾಡಿದ ಕೇಂದ್ರ ಸರ್ಕಾರ
2. ರಾಜ್ಯದಲ್ಲಿ ಮಳೆಯಿಂದಾಗಿ ೧೪ ಲಕ್ಷ ಹೆಕ್ಟೇರ್ ಕೃಷಿ ಭೂಮಿ ನಷ್ಟ - ಸಚಿವ ಎನ್.ಚೆಲುವರಾಯಸ್ವಾಮಿ ಸ್ಪಷ್ಟನೆ
3. ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ಪ್ರಗತಿ ಪರಿಶೀಲನೆ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ
4. ಜನತೆಯ ದಿಕ್ಕು ತಪ್ಪಿಸಲು ರಾಜ್ಯದಲ್ಲಿ ಆರ್‌ಎಸ್‌ಎಸ್ ಗೆ ನಿಷೇಧ ; ಬಿಜೆಪಿ ಆರೋಪ
5. ರಾಜ್ಯದ ಕರಾವಳಿ ಸೇರಿದಂತೆ ಹಲವೆಡೆ ಗುಡುಗು ಸಹಿತ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

<><><><>

ಕರ್ನಾಟಕ ಹಾಗೂ ಮಹಾರಾಷ್ಟ್ರ ರಾಜ್ಯಗಳಿಗೆ ವಿಪತ್ತು ಪರಿಹಾರಕ್ಕಾಗಿ ಕೇಂದ್ರ ಸರ್ಕಾರ ೧ ಸಾವಿರದ ೯೫೦ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ. ಈ ವರ್ಷದ ನೈಋತ್ಯ ಮಾನ್ಸೂನ್‌ನಲ್ಲಿ ಅತಿ ಹೆಚ್ಚು ಮಳೆ ಮತ್ತು ಪ್ರವಾಹದಿಂದ ಹಾನಿಗೊಳಗಾದ ಜನರಿಗೆ ತಕ್ಷಣದ ಪರಿಹಾರ ನೆರವು ನೀಡಲು ರಾಜ್ಯಕ್ಕೆ ೩೮೪ ಕೋಟಿ ರೂಪಾಯಿ ಬಿಡುಗಡೆ ಮಾಡಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅನುಮೋದನೆ ನೀಡಿದ್ದಾರೆ. ಇದರ ಜೊತೆಗೆ, ಕೇಂದ್ರ ಸರ್ಕಾರವು ೨೦೨೫-೨೬ರ ಅವಧಿಯಲ್ಲಿ ಎಸ್‌ಡಿಆರ್‌ಎಫ್ ಅಡಿಯಲ್ಲಿ ೨೭ ರಾಜ್ಯಗಳಿಗೆ ೧೩ ಸಾವಿರದ ೬೦೩ ಕೋಟಿ ರೂಪಾಯಿಗಳನ್ನು ಮತ್ತು ಎನ್‌ಡಿಆರ್‌ಎಫ್ ಅಡಿಯಲ್ಲಿ ೧೫ ರಾಜ್ಯಗಳಿಗೆ ೨

ಸಾವಿರದ ೧೮೯ ಕೋಟಿ ೨೮ ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಿದೆ ಎಂದು ಐಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

<><><><>

ರಾಜ್ಯದಲ್ಲಿ ಸುರಿದ ಭಾರೀ ಮಳೆಯಿಂದಾಗಿ ೧೪ ಲಕ್ಷ ಹೆಕ್ಟೇರ್ ಕೃಷಿ ಭೂಮಿ ನಷ್ಟವಾಗಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉತ್ತರ ಕರ್ನಾಟಕ ಸೇರಿದಂತೆ ಸುಮಾರು ೧೫ ಜಿಲ್ಲೆಗಳಲ್ಲಿ ಮಳೆಯಿಂದಾಗಿ ಭಾರೀ ಹಾನಿಯುಂಟಾಗಿದೆ. ಆಯಾ ಜಿಲ್ಲಾಡಳಿತಗಳು ಸರ್ವೆ ನಡೆಸಿ ಸರ್ಕಾರಕ್ಕೆ ವರದಿ ನೀಡಿದ ಕೂಡಲೇ ಪರಿಹಾರ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ಮಳೆ ಹಾನಿ ಬಗ್ಗೆ ಸರ್ವೆ ಕಾರ್ಯ ಮುಗಿದಿದ್ದು, ಸರ್ಕಾರಕ್ಕೆ ವರದಿ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಪರಿಹಾರ ಹಂಚಿಕೆ ಆರಂಭವಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಸಚಿವ ಕುಮಾರಸ್ವಾಮಿ ಮಂಡ್ಯ ಜಿಲ್ಲೆ ಮತ್ತು ರಾಜ್ಯದ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಿ ಕೇಂದ್ರದಿಂದ ವಿಶೇಷ ಪ್ಯಾಕೇಜ್‌ಗಳನ್ನು ತರಲಿ ಎಂದು ಸಲಹೆ ನೀಡಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆಯ ಪ್ರಗತಿ ಪರಿಶೀಲನೆ ನಡೆಸಿದರು. ಸಭೆಯಲ್ಲಿ ಸಚಿವರಾದ ಕೆ.ಜೆ.ಜಾರ್ಜ್, ಶಿವರಾಜ ತಂಗಡಗಿ, ರಾಮಲಿಂಗಾ ರೆಡ್ಡಿ, ಭೈರತಿ ಸುರೇಶ್, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂಧನ್ ಆರ್. ನಾಯಕ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

<><><><>

ರಾಜ್ಯ ಸರ್ಕಾರ ಪ್ರಾರಂಭಿಸಿರುವ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಗಣತಿ ಪೂರ್ಣಗೊಂಡಿದೆ. ಈವರೆಗೆ ರಾಜ್ಯಾದ್ಯಂತ ಶೇಕಡ ೯೭ರಷ್ಟು ನಿವಾಸಗಳ ಶೇಕಡ ೮೭ರಷ್ಟು ಜನರ ಸಮೀಕ್ಷೆ ಪೂರ್ಣಗೊಂಡಿದೆ ಎಂದು ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ಮಾಹಿತಿ ನೀಡಿದೆ. ಆದರೆ, ಬೆಂಗಳೂರು ವ್ಯಾಪ್ತಿಯಲ್ಲಿ ಸಮೀಕ್ಷೆ ಕಾರ್ಯ ತಡವಾಗಿ ಆರಂಭವಾಗಿದ್ದು, ಪ್ರಗತಿಯಲ್ಲಿಯೂ ಸಹ ಹಿಂದುಳಿದಿದೆ. ಇದುವರೆಗೆ ಶೇಕಡ ೪೦ರಷ್ಟು ಜನರ ಸಮೀಕ್ಷೆ ಮಾತ್ರ ಪೂರ್ಣಗೊಂಡಿದೆ.

ಸಮೀಕ್ಷೆಯನ್ನು ಪೂರ್ಣಗೊಳಿಸಲು ಮತ್ತಷ್ಟು ಕಾಲಾವಧಿ ಅಗತ್ಯವಿದೆ ಎಂದು ಗಣತಿ ನಡೆಸುತ್ತಿರುವ ಶಿಕ್ಷಕರು ಹಾಗೂ ಮತ್ತಿತರ ಕಂದಾಯ ಅಧಿಕಾರಿಗಳು ಆಯೋಗಕ್ಕೆ ಮನವಿ ಸಲ್ಲಿಸಿದ್ದಾರೆ.

<><><>

ಭತ್ತದಂತಹ ಬೆಳೆಗಳ ಜೊತೆಗೆ ಬೇಳೆಕಾಳುಗಳನ್ನು ಬೆಳೆಯಲು ರೈತರು ಮುಂದಾಗಬೇಕು. ಇದರಿಂದ ಬೇಳೆ ಕಾಳುಗಳ ಆಮದು ತಗ್ಗಲಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆಗಳ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕರೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಇಂದು ೩ನೇ ಕೃಷಿ ಕೀಟ ಜೈವಿಕ ನಿಯಂತ್ರಣ ಪ್ರದರ್ಶನ ಮತ್ತು ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ರಾಷ್ಟ್ರೀಯ ಕೃಷಿ ಕೀಟ ಸಂಪನ್ಮೂಲಗಳ ಬ್ಯೂರೋದ ೩೩ನೇ ಸಂಸ್ಥಾಪನಾ ದಿನಾಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಕೇಂದ್ರ ಸರ್ಕಾರ ರೈತರ ಕಲ್ಯಾಣ ಹಾಗೂ ಅಭ್ಯುದಯಕ್ಕೆ ಬದ್ಧವಾಗಿದೆ ಎಂದು ತಿಳಿಸಿದರು. ಕೀಟನಾಶಕಗಳಿಂದ ಮಣ್ಣಿನ ಫಲವತ್ತತೆ ಕಡಿಮೆಯಾಗುತ್ತಿದ್ದು ರೈತರು ಸಹಜ ಕೃಷಿಗೆ ಒತ್ತು ನೀಡಬೇಕು ಎಂದು ಸಲಹೆ ನೀಡಿದ್ದಾರೆ. ಇದೇ ವೇಳೆ ಮಾತನಾಡಿದ ಕೇಂದ್ರ ಅತಿ ಸಣ್ಣ, ಸಣ್ಣ ಉದ್ಯಮಗಳು ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ದೇಶದಲ್ಲಿ ೧೪೦ ಕೋಟಿ ಜನಸಂಖ್ಯೆ ಇದ್ದರೂ ಅದಕ್ಕಿಂತ ಹೆಚ್ಚು ಜನರಿಗೆ ಉಪಯೋಗವಾಗುವಷ್ಟು ಕೃಷಿ ಹಾಗೂ ತೋಟಗಾರಿಕಾ ಉತ್ಪಾದನೆಯಾಗುತ್ತಿದೆ ಎಂದು ಹೇಳಿದ್ದಾರೆ.

<><><>

ಆರ್‌ಎಸ್‌ಎಸ್ ವಿಚಾರದಲ್ಲಿ ಸರ್ಕಾರ ಯಾವುದೇ ಹೊಸ ನಿಯಮ ರೂಪಿಸಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನ ಕೋರಮಂಗಲದ ವೀರಯೋಧ ಉದ್ಯಾನವನದಲ್ಲಿ ನಡೆಸಿದ ನಾಗರಿಕರೊಂದಿಗೆ ನಡೆಸಿದ ಸಂವಾದದಲ್ಲಿ ಮಾತನಾಡಿದ ಅವರು, ಬಿಜೆಪಿ ಸರ್ಕಾರ ಈ ಹಿಂದೆ ನೀಡಿದ್ದ ಆದೇಶವನ್ನೇ ಹೊರಡಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ೨೦೧೩ರಲ್ಲಿ ಜಗದೀಶ್ ಶೆಟ್ಟರ್ ಮುಖ್ಯಮಂತ್ರಿಯಾಗಿದ್ದಾಗ ಶಿಕ್ಷಣ ಇಲಾಖೆ ಹೊರಡಿಸಿದ್ದ ಆದೇಶವನ್ನು ಮುಂದುವರಿಸಲಾಗಿದೆ ಎಂದು ಹೇಳಿದ್ದಾರೆ.

<><><>

ಇನ್ಫೋಸಿಸ್‌ನಿಂದ ಸರ್ಕಾರಕ್ಕೆ ಹೆಚ್ಚು ಆದಾಯ ಬರುತ್ತಿದ್ದು ಅವರು ಆಂಧ್ರಕ್ಕೆ ಹೋದರೆ ರಾಜ್ಯ ಸರ್ಕಾರದ ಗತಿ ಏನು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್‌ಎಸ್‌ಎಸ್ ವಿರುದ್ಧ ಕೈಗೊಳ್ಳುವ ಕ್ರಮಗಳು ಮುಂದೆ ಕಾಂಗ್ರೆಸ್ಸ್‌ಗೆ ತಿರುಗು ಬಾಣವಾಗಲಿದೆ ಎಂದು ಹೇಳಿದ್ದಾರೆ. ರಾಷ್ಟ್ರೀಯ ಸ್ವಯಂ ಸೇವಾ ಸಂಘಟನೆಯ ಕಾರ್ಯಗಳೇನು ಎಂಬುದನ್ನು ಮೊದಲು ತಿಳಿದುಕೊಳ್ಳಿ ಎಂದು ಕಾಂಗ್ರೆಸ್ ನಾಯಕರಿಗೆ ತಿರುಗೇಟು ನೀಡಿದ್ದಾರೆ. ರಾಜ್ಯ ಸರ್ಕಾರ ಎಷ್ಟು ಸಾಲ ಮಾಡಿದೆ, ಈಗ ಎಷ್ಟು ಹಣವಿದೆ ಎಂಬ ಬಗ್ಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಶ್ವೇತ ಪತ್ರ ಹೊರಡಿಸಲಿ ಎಂದು ಆಗ್ರಹಿಸಿದ್ದಾರೆ.

<><><><>

ಜನತೆಯ ದಿಕ್ಕು ತಪ್ಪಿಸಲು ರಾಜ್ಯ ಸರ್ಕಾರ ಆರ್‌ಎಸ್‌ಎಸ್ ಗೆ ನಿಷೇಧ ಹೇರುವ ಕಾರ್ಯಕ್ಕೆ ಮುಂದಾಗಿದೆ ಎಂದು ಮೈಸೂರು ಕೊಡಗು ಸಂಸದ ಯದುವೀರ್ ಒಡೆಯರ್ ಆರೋಪಿಸಿದ್ದಾರೆ. ಕೊಡಗಿನಲ್ಲಿ ಮಾತನಾಡಿದ ಅವರು, ಸರಕಾರಿ ಜಾಗ ಬಳಸಲು ಶಿಷ್ಟಾಚಾರ ಇರುವುದು ಸಮಸ್ಯೆ ಅಲ್ಲ. ಸರಕಾರದ ಮಾನದಂಡವನ್ನು ಪಾಲನೆ ಮಾಡಿದರೆ ಅನುಮತಿ ಕೊಡಲೇಬೇಕು ಎಂದು ಯದುವೀರ್ ತಿಳಿಸಿದ್ದಾರೆ. ರಸ್ತೆ ಅಭಿವೃದ್ಧಿಗೆ ಕಾಳಜಿ ತೋರದ ಕಾಂಗ್ರೆಸ್ ನಾಯಕರಿಗೆ ಆರ್‌ಎಸ್‌ಎಸ್ ನಿಷೇಧಕ್ಕೆ ಎಲ್ಲಿಲ್ಲದ ಆಸಕ್ತಿ ಕಂಡುಬಂದಿದೆ ಎಂದು ಅವರು ವ್ಯಂಗ್ಯವಾಡಿದ್ದಾರೆ.

<><><><>

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಹಾಗೂ ಶಾಲೆಯಿಂದ ದೂರವುಳಿಯುವ ಮಕ್ಕಳ ಸಂಖ್ಯೆ ಕಡಿಮೆಗೊಳಿಸುವ ಉದ್ದೇಶದಿಂದ ಹಾವೇರಿ ಜಿಲ್ಲೆಯ ೧೮ ಶಾಲೆಗಳು ಸೇರಿದಂತೆ ರಾಜ್ಯದ ೪೭೪ ಪ್ರೌಢಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಸ್ಕೂಲ್ ಆಗಿ ಉನ್ನತೀಕರಣಗೊಳಿಸಿ ಆದೇಶ ಹೊರಡಿಸಲಾಗಿದೆ. ಪ್ರತಿ ಶಾಲೆಯ ಅಭಿವೃದ್ಧಿಗೆ ಕೆಲ ನಿಬಂಧನೆಗಳಿಗೆ ಒಳಪಟ್ಟು ತಲಾ ೨ ಕೋಟಿಯಿಂದ ೪ ಕೋಟಿ ರೂಪಾಯಿ ನೀಡುವುದಾಗಿಯೂ ಸರ್ಕಾರ ಘೋಷಣೆ ಮಾಡಿದೆ ಎಂದು ಹಾವೇರಿ ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಮೋಹನ್ ದಂಡಿ ಆಕಾಶವಾಣಿಗೆ ತಿಳಿಸಿದ್ದಾರೆ.

**ಧ್ವನಿ : ಮೋಹನ್ ದಂಡಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ**

<><><><>

ಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ದೇವರಾಜ ಅರಸು ಶಿಕ್ಷಣ ಸಂಸ್ಥೆಯ ವತಿಯಿಂದ ಹಿರಿಯ ರಾಜಕೀಯ ಮುತ್ಸದ್ದಿ ಹಾಗೂ ಕೇಂದ್ರದ ಮಾಜಿ ಸಚಿವ ದಿವಂಗತ

ಆರ್.ಎಲ್.ಜಾಲಪ್ಪನವರ ಜನ್ಮ ಶತಮಾನೋತ್ಸವ ಕಾರ್ಯಕ್ರಮ ನಡೆಯಿತು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಡಿನ ಹಿರಿಯ ರಾಜಕಾರಣಿ ಆರ್.ಎಲ್.ಜಾಲಪ್ಪ ದಕ್ಷ ಆಡಳಿತಗಾರರಾಗಿದ್ದರು. ಅವರು ನಿರ್ವಹಿಸಿದ ಎಲ್ಲಾ ಖಾತೆಗಳಲ್ಲೂ ತಮ್ಮದೇ ಆದ ಹೆಜ್ಜೆ ಗುರುತುಗಳನ್ನು ದಾಖಲಿಸಿದ್ದು ಮಾತ್ರವಲ್ಲ, ರೈತರಿಗೆ, ಕೃಷಿಗೆ ಅತ್ಯಂತ ಮಹತ್ವ ನೀಡಿ ಸಾಮಾಜಿಕ ನ್ಯಾಯವನ್ನು ಪ್ರತಿಪಾದಿಸಿದ್ದರು ಎಂದು ತಿಳಿಸಿದ್ದಾರೆ.

<><><><>

ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ಈಶಾನ್ಯ ಮುಂಗಾರು ತೀವ್ರವಾಗಿದ್ದು, ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನ ಹೆಚ್ಚಿನ ಸ್ಥಳಗಳಲ್ಲಿ ಮತ್ತು ಉತ್ತರ ಒಳನಾಡಿನ ಒಂದು ಅಥವಾ ಎರಡು ಸ್ಥಳಗಳಲ್ಲಿ ಮಳೆಯಾಗಿದೆ. ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಜಿಲ್ಲೆಗಳ ಒಂದೆರಡು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಕೊಡಗು, ಹಾಸನ, ಶಿವಮೊಗ್ಗ ಕೋಲಾರ ಜಿಲ್ಲೆಗಳಲ್ಲಿ ಭಾರೀ ಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನಲ್ಲೂ ಗುಡುಗು ಸಹಿತ ಮಳೆಯಾಗಲಿದೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಬಿಂಡಿಗ ದೇವಿರಮ್ಮ ಜಾತ್ರಾ ಮಹೋತ್ಸವ ಆರಂಭಗೊಂಡಿದ್ದು, ಇಂದು ಮುಂಜಾನೆಯಿಂದಲೇ ಸಾವಿರಾರು ಭಕ್ತರು ದೇವಿರಮ್ಮ ಬೆಟ್ಟ ಏರಿ ಸಮುದ್ರ ಮಟ್ಟದಿಂದ ಸುಮಾರು ೩ ಸಾವಿರ ಅಡಿಗಳಷ್ಟು ಮೇಲಿರುವ ದೇವಿಯ ದರ್ಶನವನ್ನು ಪಡೆದುಕೊಂಡಿದ್ದಾರೆ. ಇಂದು ಮತ್ತು ನಾಳೆ ದೇವಿಯ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ. ಈ ಭಾಗದಲ್ಲಿ ಹೆಚ್ಚಿನ ಮಳೆಯಾಗುತ್ತಿದ್ದು, ಬೆಟ್ಟವೇರುವ ಭಕ್ತರು ಎಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ತಿಳಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>